ಉ) ದೊರೆಯುವ ಹಣದ ಸೌಲಭ್ಯವನ್ನೊದಗಿಸಿಕೊಂಡು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು.

ನ್ಯಾಷನಲ್ ಕೋ ಆಪರೇಟಿವ್ ಬ್ಯಾಂಕ್ 'ರಿ' ಬೆಂಗಳೂರು, ಇದರ ಸದಸ್ಯರ ಸಂಖ್ಯೆ

328 (659): ಶ್ರೀ ಸೋಮಪ್ಪ ಸುವರ್ಣ (ಮೂಡಬಿದರೆ)

ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ನ್ಯಾಷನಲ್ ಕೋ ಆಪರೇಟಿವ್ ಬ್ಯಾಂಕ್ ಲಿ., ಬೆಂಗಳೂರಿನಲ್ಲಿ ಡಿಸೆಂಬರ್ 1992ರ ಅಂತ್ಯಕ್ಕೆ ಇರುವ ಸದಸ್ಯರ ಸಂಖ್ಯೆ ಎಷ್ಟು ? (ಷೇರು ಹೋಲ್ಡರ್ಸ್) ಹಾಗೂ ಅಸೋಸಿಯೇಟೆಡ್ ಸದಸ್ಯರುಗಳೆಷ್ಟು ?

ಆ) ಷೇರುಗಳನ್ನು ಕ್ಯುಮುಲೇಟಿವ್ ಡಿಪಾಜಿಟ್‌ನಲ್ಲಿ 500 ರಿಂದ 5,000 ರೂ.ಗಳನ್ನು ತೊಡಗಿಸಿದವರಿಗೆ ಮಾತ್ರ ನೀಡುತ್ತಿರುವ ಅಂಶವು ಶತವೇ ಅಥವಾ ಇಲ್ಲವೇ ?

ಇ) ಹಾಗಿದ್ದಲ್ಲಿ ಸರ್ಕಾರವು ಕಾನೂನಿಗೆ ವಿರುದ್ಧವಾದಾಗ ಕ್ಯುಮುಲೇಟಿವ್ ಡಿಪಾಜಿಟ್‌ನಲ್ಲಿ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಆಡಳಿತ ಮಂಡಳಿಯ ವಿರುದ್ಧ ಕ್ರಮ ಕೈಗೊಳ್ಳುತ್ತದೆಯೇ ?

ಈ) ಕಾನೂನನ್ನು ಗಣನೆಗೆ ತೆಗೆದುಕೊಳ್ಳದೇ ಷೇರುಗಳನ್ನು ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಉ) ಹಾಲಿ ಇರುವ ಸದಸ್ಯರುಗಳಲ್ಲಿ ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗಗಳಿಗೆ ಸೇರಿದ ಸದಸ್ಯರುಗಳೆಷ್ಟು ?

ಊ) ಈ ಮೇಲ್ಕಂಡ ಬ್ಯಾಂಕಿನಲ್ಲಿ ಹೆಚ್ಚು ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗದವರುಗಳನ್ನು ಸದಸ್ಯರನ್ನಾಗಿ ತೆಗೆದುಕೊಳ್ಳಲು ಸರ್ಕಾರ ಕ್ರಮ ತೆಗೆದುಕೊಳ್ಳುತ್ತಿದೆಯೇ ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಸಹಕಾರಿ ಸಚಿವರು):

ಅ) ಸದಸ್ಯರು (ಷೇರು ಹೋಲ್ಡರ್ಸ್) – 11,150 ಅಸೋಸಿಯೇಟೆಡ್ ಸದಸ್ಯರು – ಇಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಇಲ್ಲ.

ಉ) 86

ಊ) ಸಹಕಾರ ಸಂಘಗಳಲ್ಲಿ ಸದಸ್ಯತ್ವವು ಸ್ವಯಂಪ್ರೇರಿತವಾಗಿದೆ. ಆದಾಗ್ಯೂ ಹೆಚ್ಚಿನ ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸದಸ್ಯತ್ವ ನೀಡಲು ಆಡಳಿತ ಮಂಡಳಿಗೆ ಸಲಹೆ ಮಾಡಲಾಗುವುದು.

ಜಿಲ್ಲಾಪರಿಷತ್ತು ಮತ್ತು ಮಂಡಲ ಪಂಚಾಯ್ತಿ ಚುನಾವಣೆ

329 (926): ಶ್ರೀ ವೈ. ಕೆ. ರಾಮಯ್ಯ (ಕುಣಿಗಲ್)